ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಪ್ರೌಢಶಾಲೆಗಳಂ

೧೬೭(೬೯೦) ಶ್ರೀ ಬಿ. ರಮಾನಾಥ ರೈ (ಬಂಟ್ವಾಳ್).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ —

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈಗ ಅಸ್ತಿತ್ವದಲ್ಲಿರುವ ಪ್ರೌಢಶಾಲೆಗಳ ಒಟ್ಟು ಸಂಖ್ಯೆ ಎಷ್ಟು?

ಆ) ಸದರಿ ಹೈಸ್ಕೂಲುಗಳಲ್ಲಿ ಹಾಲಿ ಖಾಲಿ ಇರುವ ಮುಖ್ಯೋಪಾಧ್ಯಾಯರುಗಳ ಹಾಗೂ ಉಪಾಧ್ಯಾಯರುಗಳ ಸಂಖ್ಯೆ ಎಷ್ಟು?

ಇ) ಸದರಿ ಶಾಲೆಗಳ ಪೈಕಿ ಸ್ವಂತ ಕಟ್ಟಡ ಹೊಂದಿರದ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?

ಈ) ದಕ್ಷಿಣ ಕನ್ನಡ ಜಿಲ್ಲೆಯ ಪ್ರೌಢಶಾಲೆಗಳಲ್ಲಿ ಖಾಲಿ ಬಿದ್ದಿರುವ ಮುಖ್ಯೋಪಾಧ್ಯಾಯರ ಸ್ಥಾನವನ್ನು ಭರ್ತಿ ಮಾಡುವ ಉದ್ದೇಶ ಸರ್ಕಾರಕ್ಕಿದೆಯೋ ಹಾಗಿದ್ದಲ್ಲಿ ಯಾವಾಗ ಭರ್ತಿ ಮಾಡಲಾಗುವುದು?

ಉ) ಸ್ವಂತ ಕಟ್ಟಡ ಇಲ್ಲದ ಪ್ರೌಢಶಾಲೆಗಳಿಗೆ ಸ್ವಂತ ಕಟ್ಟಡ ಒದಗಿಸಿಕೊಡುವ ಯೋಜನೆ ಸರ್ಕಾರಕ್ಕಿದೆಯೇ? ಯಾವಾಗ?

ಶ್ರೀ ಎಂ. ಚಂದ್ರಶೇಖರ್ (ಶಿಕ್ಷಣ ಮಂತ್ರಿಗಳು).—

ಅ) ೭೨.

ಆ) ೩೨ ಮುಖ್ಯೋಪಾಧ್ಯಾಯರ ಹುದ್ದೆಗಳು ಮತ್ತು ೧೫೧ ಉಪಾಧ್ಯಾಯರ ಹುದ್ದೆಗಳು ಖಾಲಿ ಇವೆ.

ಇ) ೨೫.

ಈ) ಪರಿಶೀಲನೆಯಲ್ಲಿದೆ.

ಉ) ಸರ್ಕಾರಿ ಶಾಲೆಗಳಿಗೆ ಕಟ್ಟಡ ಒದಗಿಸುವುದು ಸರ್ಕಾರದ ಯೋಜನೆಯಲ್ಲಿಲ್ಲ. ಜಿಲ್ಲಾ ಪರಿಷತ್‌ಗಳ ವಶಕ್ಕೆ ಪ್ರೌಢಶಾಲೆಗಳು ವರ್ಗಾಯಿಸಿರುವುದರಿಂದ, ಅವುಗಳು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಅಧ್ಯಕ್ಷರು.—ಲಿಖಿತ ಮೂಲಕ ಉತ್ತರಿಸಲಾಗುವ ಪ್ರಶ್ನೆಗಳ ೧೦ನೇ ಪಟ್ಟಿಯನ್ನು ಸಭೆಯ ಮುಂದಿಡುವುದು.

ಶ್ರೀ ಎಂ. ಚಂದ್ರಶೇಖರ್.—ಲಿಖಿತ ಮೂಲಕ ಉತ್ತರಿಸುವ ೧೦ನೇ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

ಶಿವಮೊಗ್ಗ ಜಿಲ್ಲೆಯಲ್ಲಿ ಚಾನುವಾರುಗಳನ್ನು ಹುಲಿ ತಿಂದ ಪ್ರಕರಣಗಳ ಬಗ್ಗೆ

೩೦೫(೫೫೫) ಶ್ರೀ ಬಿ. ಸ್ವಾಮಿರಾವ್ (ಹೊಸನಗರ).—ಮಾನ್ಯ ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಚಾನುವಾರುಗಳನ್ನು ಹುಲಿ ತಿಂದ ಪ್ರಕರಣಗಳೆಷ್ಟು?

ಆ) ಎಷ್ಟು ಜನರಿಗೆ ಪರಿಹಾರ ಕೊಡಲಾಗಿದೆ?

ಶ್ರೀ ಬಿ. ರಾಚಯ್ಯ (ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು).—

ಅ) ೧೯೮೬-೮೭ ರಲ್ಲಿ ೩೭೯ ಪ್ರಕರಣಗಳು. ೧೯೮೭-೮೮ ರಲ್ಲಿ ೩೨೧ ಪ್ರಕರಣಗಳು. ೧೯೮೮-೮೯ ರಲ್ಲಿ ೧೩೭ ಪ್ರಕರಣಗಳು.

ಆ) ಮೇಲ್ಕಂಡ ಎಲ್ಲಾ ಪ್ರಕರಣಗಳಿಗೂ ಪರಿಹಾರ ಧನವನ್ನು ಮಂಜೂರು ಮಾಡಲಾಗಿದೆ.

ಬೀಟೆ ಮರಗಳ ಕಳ್ಳ ಸಾಗಾಣಿಕೆ

೩೦೬(೬೬೯) ಶ್ರೀ ಬಿ. ಸ್ವಾಮಿರಾವ್ (ಹೊಸನಗರ).—ಮಾನ್ಯ ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ :—

ಅ) ರಾಜ್ಯದಲ್ಲಿ ೧೯೮೬ ರಿಂದ ಈ ತನಕ ಅರಣ್ಯದಲ್ಲಿರುವ ಬೀಟೆ ಮರಗಳನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವುದು ನಿಜವೆ?

ಆ) ಅರಣ್ಯ ಇಲಾಖೆ ಸಿಬ್ಬಂದಿಗಳು ೧೯೮೭ ರಿಂದ ಈ ವರೆಗೆ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ದಾಖಲು ಮಾಡಿದ್ದಾರೆ?

ಇ) ಎಷ್ಟು ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ವಿಧಿಸಲಾಗಿದೆ?

ಈ) ಎಷ್ಟು ಬೆಲೆಯ ಬೀಟೆ ಮರಗಳನ್ನು ಇಲ್ಲಿಯ ತನಕ ವಶಪಡಿಸಿಕೊಂಡಿದ್ದಾರೆ?

ಶ್ರೀ ಬಿ. ರಾಚಯ್ಯ (ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು).—

ಅ) ಗಮನಕ್ಕೆ ಬಂದಿದೆ.

ಆ) ೧೯೮೭ ರಿಂದ ಇಲ್ಲಿಯವರೆವಿಗೆ ಒಟ್ಟು ೫೬೭ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ.

ಇ) ೧೯ ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ವಿಧಿಸಲಾಗಿದೆ. ಬಾಕಿ ಪ್ರಕರಣಗಳು ತನಿಖೆಯಲ್ಲಿದೆ.

ಈ) ೧೫,೨೨,೦೦೦-೦೦ ರೂ. ಬೆಲೆ ಬಾಳುವ ಬೀಟೆ ಮರಗಳನ್ನು ವಶಪಡಿಸಿಕೊಳ್ಳಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾಥಮಿಕ ಶಿಕ್ಷಕರ ಕೊರತೆ

೩೦೭(೬೮೩) ಶ್ರೀ ಬಿ. ಎಂ. ಇದಿನಬ್ಬ (ಉಳ್ಳಾಲ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ :—

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಲಿಯಿರುವ ಪ್ರಾಥಮಿಕ ಶಿಕ್ಷಕರ ಸಂಖ್ಯೆ ಎಷ್ಟು?

ಆ) ಈ ಕೊರತೆಯಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತುಂಬಾ ತೊಂದರೆಯಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ?

ಇ) ಹಾಗಿದ್ದಲ್ಲಿ ಈ ಕೊರತೆ ನೀಗಿಸಲು ಕೈಗೊಂಡ ಕ್ರಮಗಳೇನು?